ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೬೧ Volume 161	ಮೈಸೂರು, ಬುಧವಾರ, ೨೮, ಜನವರಿ, ೨೦೨೬ (ಮಾಘ , ೨೮, ಶಕವರ್ಷ, ೧೯೪೭) MYSURU, WEDNESDAY, 28, JANURAY , 2026 (MAGHA , 28, SHAKAVARSHA, 1947)	ಸಂಚಿಕೆ ೦೮ Issue 08

ಭಾಗ ೬ಎ

ಮೈಸೂರು ವಿಭಾಗಕ್ಕೆ ಮತ್ತು ಮೈಸೂರು, ಮಂಡ್ಯ, ಹಾಸನ, ಚಿಕ್ಕಮಗಳೂರು, ದಕ್ಷಿಣಕನ್ನಡ, ಕೊಡಗು, ಚಾಮರಾಜನಗರ, ಉಡುಪಿ ಜಿಲ್ಲೆಗಳಿಗೆ ಅನ್ವಯವಾಗುವ ಅಧಿಸೂಚನೆಗಳು ಮತ್ತು ಆದೇಶಗಳು.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು

Office of the Deputy Commissioner, Mysore District, Mysore-570005

ದೂರವಾಣಿ ಸಂ:0821-2424079 ಫ್ಯಾಕ್ಸ್ ಸಂ:2429012 &2428383 E-Mail:-deo.mysore@gmail.com

ನಂ. ELN(2)CR 143/2025-26 **ದಿನಾಂಕ:19.01.2026**

ಅಧಿಸೂಚನೆ

ಟಿ.ನರಸೀಪುರ ತಾಲ್ಲೂಕಿನಲ್ಲಿ ರಚನೆಯಾಗಿದ್ದ ಗ್ರಾಮ ಪಂಚಾಯಿತಿಗಳ ಪೈಕಿ ತಲಕಾಡು ಗ್ರಾಮ ಪಂಚಾಯಿತಿ ಪೂರ್ಣವಾಗಿ ಮತ್ತು ಬಿ.ಶೆಟ್ಟಹಳ್ಳಿ [ಶೆಟ್ಟಹಳ್ಳಿ(ಬೆ) (ಕುಕ್ಕೂರು)] ಗ್ರಾಮ ಪಂಚಾಯತಿಯನ್ನು ಭಾಗಶಃ ಪ್ರದೇಶಗಳನ್ನು ಅಳವಡಿಸಿಕೊಂಡು ಹೊಸದಾಗಿ ತಲಕಾಡು ಪಟ್ಟಣ ಪಂಚಾಯತಿಯನ್ನು ರಚನೆ ಮಾಡಿ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 83 ಎಂಎಲ್ಆರ್2025(e) ದಿನಾಂಕ:31.12.2025 ರಂತೆ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಭಾಗಶಃ ಸೇರ್ಪಡೆಯಾಗಿರುವ ಗ್ರಾಮ ಪಂಚಾಯಿತಿಗಳ ಉಳಿದ ಗ್ರಾಮಗಳು ಹಾಗೂ ಪ್ರದೇಶಗಳನ್ನು ಅಳವಡಿಸಿಕೊಂಡು ಗ್ರಾಮ ಪಂಚಾಯತಿಗಳನ್ನು ಪುನರ್ ರಚನೆ ಮಾಡಿ ಅಧಿಸೂಚಿಸಬೇಕಾಗಿರುತ್ತದೆ.

ಈ ಸಂಬಂಧ ಸರ್ಕಾರದ ಕಾರ್ಯದರ್ಶಿಗಳು (ಪಂಚಾಯತ್ ರಾಜ್), ಕರ್ನಾಟಕ ಸರ್ಕಾರ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅರೆ ಸರ್ಕಾರಿ ಪತ್ರ ದಿನಾಂಕ:07.01.2026ರ ಪತ್ರದಲ್ಲಿ "ನಗರ ಪ್ರದೇಶವಾಗಿ ಪರಿವರ್ತನೆಯಾಗಿ, ಬಾಕಿ ಉಳಿದಂತಹ ಹಾಗೂ ಭೌಗೋಳಿಕವಾಗಿ ನಿರಂತರತೆಯನ್ನು ಹೊಂದಿರುವ ಗ್ರಾಮಗಳನ್ನು /ಜನವಸತಿ ಪ್ರದೇಶಗಳನ್ನು ಒಗ್ಗೂಡಿಸಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಪ್ರಕರಣ 4(1)ರಲ್ಲಿ ನಿಗದಿಪಡಿಸಿರುವ ಜನಸಂಖ್ಯೆಯನ್ನು ಹೊಂದಿದ್ದರೆ, ಅಂತಹ ಪ್ರದೇಶಗಳನ್ನು ಹೊಸ ಗ್ರಾಮ ಪಂಚಾಯತಿಯಾಗಿ ಘೋಷಿಸುವುದು. ಭೌಗೋಳಿಕವಾಗಿ ನಿರಂತರತೆ ಅಥವಾ ಜನಸಂಖ್ಯೆಯನ್ನು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without preayment WPP No. 297

ಹೊಂದದಿದ್ದಲ್ಲಿ ಅಂತಹ ಪ್ರದೇಶಗಳನ್ನು ಹತ್ತಿರದ ಗ್ರಾಮ ಪಂಚಾಯಿತಿಗಳಿಗೆ ಸೇರಿಸಿ ಪುನರ್ ರಚಿಸಿದ ಗ್ರಾಮ ಪಂಚಾಯತಿಯನ್ನು ಅಧಿನಿಯಮದ ಪ್ರಕರಣ 4 ರಡಿಯಲ್ಲಿ ಘೋಷಿಸತಕ್ಕದ್ದು ಎಂದು ಆದೇಶ ನೀಡಲಾಗಿರುತ್ತದೆ. ನ್ಯಾಯಾಲಯದ ನಿಂದನಾ ಅರ್ಜಿ ಸಂಖ್ಯೆ:534/2024 c/w 1151/2023 ಮತ್ತು 1152/2023 ಬಾಕಿ ಇರುವುದರಿಂದ, ಸಮಯದ ಅಭಾವದ ಕಾರಣ ಕರಡು ಅಧಿಸೂಚನೆ ಮೇಲಿನ ಆಕ್ಷೇಪಣೆಯನ್ನು 07 ದಿನಗಳಿಗೆ ಸೀಮಿತಗೊಳಿಸಿ ಆಹ್ವಾನಿಸತಕ್ಕದ್ದು ಎಂದು ನಿರ್ದೇಶಿಸಲಾಗಿರುತ್ತದೆ. ಅದರಂತೆ, ಈ ಕೆಳಕಂಡ ಗ್ರಾಮ ಪಂಚಾಯತಿಯ ಹೆಸರು ಹಾಗೂ ಸದರಿ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಸೇರಿರುವ ಗ್ರಾಮಗಳ ವಿವರಗಳನ್ನು ಕರಡು ಅಧಿಸೂಚನೆಯ ಮೂಲಕ ಪ್ರಗಟಿಸಿ, ಸದರಿ ಕರಡು ಅಧಿಸೂಚನೆಯ ಪ್ರತಿಯನ್ನು ಜಿಲ್ಲೆಯ ಪ್ರಮುಖ ಕಚೇರಿಗಳಲ್ಲಿ ಪ್ರಕಟಿಸಿ ಸಾರ್ವಜನಿಕರ ಅವಗಾಹನೆಗೆ ಲಭ್ಯಪಡಿಸಿ, ಭಾಧಿತರಾಗುವ ಸಾರ್ವಜನಿಕರಿಂದ ದಿನಾಂಕ:16.01.2026 ರ ಒಳಗೆ ಆಕ್ಷೇಪಣೆಗಳನ್ನು ಲಿಖಿತ ಮೂಲಕ ಆಹ್ವಾನಿಸಲಾಗಿತ್ತು.

ನಿಗದಿತ ಅವಧಿಯಲ್ಲಿ ಯಾವುದೇ ಸಲಹೆಗಳು / ಆಕ್ಷೇಪಣೆಗಳು ಸ್ವೀಕೃತವಾಗಿರುವುದಿಲ್ಲ.

ಆದ್ದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ 4ನೇ ಪ್ರಕರಣದ 2ನೇ ಉಪ ಪ್ರಕರಣದಂತೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಮೈಸೂರು ಜಿಲ್ಲೆಯ **ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ.ಜಿ** ಆದ ನಾನು ಟಿ.ನರಸೀಪುರ ತಾಲ್ಲೂಕಿನ ಈ ಕೆಳಕಂಡ ಕೋಷ್ಟಕದ 3ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಿರುವ ಗ್ರಾಮಗಳನ್ನು 2ನೇ ಅಂಕಣದ ಗ್ರಾಮ ಪಂಚಾಯತಿಯ ವ್ಯಾಪ್ತಿಗೆ ಒಳಪಡುವಂತೆ ಗ್ರಾಮ ಪಂಚಾಯತಿಯನ್ನು ಪುನರ್ ರಚಿಸಿ ಅಧಿಸೂಚನೆಯನ್ನು ಹೊರಡಿಸಿದೆ.

ಕೋಷ್ಟಕ

ತಾಲ್ಲೂಕು: ಟಿ.ನರಸೀಪುರ

ಕ್ರ.ಸಂ	ಗ್ರಾಮ ಪಂಚಾಯತಿಯ ಹೆಸರು	ಗ್ರಾಮ ಪಂಚಾಯತಿ ವ್ಯಾಪ್ತಿಗೆ ಒಳಪಡುವ ಗ್ರಾಮಗಳು
1	2	3
1	ಶೆಟ್ಟಹಳ್ಳಿ(ಬೆ) (ಕುಕ್ಕೂರು)	ಕುಕ್ಕೂರು ಶೆಟ್ಟಹಳ್ಳಿ(ಬೆ) ಕಾಳಬಸವನಹುಂಡಿ ಟಿ.ಮೇಗಡಹಳ್ಳಿ ವಿಜಾಪುರ(ದಾ)

ಜಿಲ್ಲಾಧಿಕಾರಿ
ಮೈಸೂರು ಜಿಲ್ಲೆ, ಮೈಸೂರು

PR-13

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ವಿಭಾಗೀಯ ಮುದ್ರಣಾಲಯ, ಮೈಸೂರು.

VIJAY
NELAMANGALA
MUNIDALAPPA